# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 556 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08-12-2023. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸಿದ ಅನೇಕರಿಗೆ ತಾಂತ್ರಿಕ ಕಾರಣದಿಂದ ಇದುವರೆವಿಗೂ ಮೊದಲ ಕಂತು ಬಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳ ಆಧಾರ್ ಕಾರ್ಡ್, ಅವರ ಬ್ಯಾಂಕ್ ಖಾತೆ/NPCI Mapping ನೊಂದಿಗೆ ಜೋಡಣೆಯಾಗದಿದ್ದಲ್ಲಿ, ID validation Fail ಆಗಿದ್ದಲ್ಲಿ, E-KYC ಅಗತ್ಯವಿದ್ದ ಸಂದರ್ಭಗಳಲ್ಲಿ ಫಲಾನುಭವಿಗಳ ಖಾತೆಗೆ ಸಹಾಯಧನ ತಲುಪಿರುವುದಿಲ್ಲ. |
| ಆ | ಬಂದಿದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಗೆ ಅರ್ಜಿ ಸಲ್ಲಿಸಿದ್ದ ಎಷ್ಟು ಕಾರ್ಡ್‌ದಾರರಿಗೆ ಇದುವರೆಗೂ ತಾಂತ್ರಿಕ ಕಾರಣಗಳಿಂದ ಯೋಜನೆಯ ಮೊದಲ ಕಂತು ಸಿಕ್ಕಿರುವುದಿಲ್ಲ; (ವಿವರ ನೀಡುವುದು) | ಮೊದಲ ಕಂತು ಪಾವತಿಯಾಗದ ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಯ ಅರ್ಜಿದಾರರ ವಿವರ ಕೆಳಕಂಡಂತಿದೆ.<br><br>ಕ್ರ. ಸಂ. \| ಜಿಲ್ಲೆಗಳು \| ಅರ್ಜಿದಾರರ ವಿವರ<br>1 \| ದಕ್ಷಿಣಕನ್ನಡ \| 1611<br>2 \| ಉಡುಪಿ \| 1674 |
| ಇ) | ಆಗಸ್ಟ್ 15ರ ಮೊದಲು ಅರ್ಜಿ ಸಲ್ಲಿಸಿ, ಸಮ್ಮತಿ ಪಡೆದಿದ್ದರೂ ತಾಂತ್ರಿಕ ಕಾರಣದಿಂದ ಹಣ ಬಾರದ ಅರ್ಜಿಗಳಿಗೆ ತಾಂತ್ರಿಕ ಸಮಸ್ಯೆ ಬಗೆಹರಿದ ನಂತರ ಆಗಸ್ಟ ತಿಂಗಳಿನಿಂದಲೇ ಸರ್ಕಾರದ ಯೋಜನೆಯ ಫಲ ಸಿಗಲಿದೆಯೇ; | ಆಗಸ್ಟ 15ರ ಮೊದಲು ಅರ್ಜಿ ಸಲ್ಲಿಸಿ, ಸಮ್ಮತಿ ಪಡೆದಿದ್ದರೂ ತಾಂತ್ರಿಕ ಕಾರಣದಿಂದ ಹಣ ಬಾರದ ಅರ್ಜಿಗಳಿಗೆ ತಾಂತ್ರಿಕ ಸಮಸ್ಯೆ ಬಗೆಹರಿದ ನಂತರ ಆಗಸ್ಟ ತಿಂಗಳಿನಿಂದಲೇ ಸರ್ಕಾರದ ಯೋಜನೆಯ ಫಲ ನೀಡಲಾಗುವುದು. |
| ಈ) | ಹೊಸದಾಗಿ ಅರ್ಜಿ ಸಲ್ಲಿಸುವ ಅಥವಾ ಈಗಾಗಲೇ ಅರ್ಜಿ ಸಲ್ಲಿಸಿದ್ದರೂ ತಾಂತ್ರಿಕ ಕಾರಣಗಳಿಂದಾಗಿ ಸರ್ಕಾರದಿಂದ ಅನುಮೋದನೆಯಾಗಲು ತಡವಾಗಿರುವ 2ನೇ ಪಟ್ಟಿಯ ಎಲ್ಲಾ ಫಲಾನುಭವಿಗಳಿಗೆ ಆಗಸ್ಟ್‌ನಿಂದಲೇ ಪೂರ್ವಾನ್ವಯವಾಗುವಂತೆ ಹಣ ಬಿಡುಗಡೆ ಮಾಡಲು ಕ್ರಮ ವಹಿಸಲಾಗಿದೆಯೇ? | ಈಗಾಗಲೇ ಅರ್ಜಿ ಸಲ್ಲಿಸಿದ್ದರೂ ತಾಂತ್ರಿಕ ಕಾರಣಗಳಿಂದಾಗಿ ಸರ್ಕಾರದಿಂದ ಅನುಮೋದನೆಯಾಗಲು ತಡವಾಗಿರುವ 2ನೇ ಪಟ್ಟಿಯ ಎಲ್ಲಾ ಫಲಾನುಭವಿಗಳಿಗೂ ಸಹ ಆಗಸ್ಟ್ ನಿಂದಲೇ ಹಣ ಬಿಡುಗಡೆ ಮಾಡಲಾಗುತ್ತದೆ.<br><br>ಅದರೆ ಈಗ ಹೊಸದಾಗಿ ಅರ್ಜಿ ಸಲ್ಲಿಸುವವರಿಗೆ ಮಾತ್ರ ಅರ್ಜಿ ಸಲ್ಲಿಸಿದ ತಿಂಗಳಿಂದ ಸೌಲಭ್ಯ ನೀಡಲಾಗುವುದು. |

**ಸಂಖ್ಯೆ:ಮಮಇ 182 ಮಮಅ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.